RNU AIR DHARWAD

**NOVEMBER 26,2024**
**ALL INDIA RADIO- DHARWAD**
**PRADESH SAMACHARA (KANNADA) 12.10PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ದೇಶದಲ್ಲಿ ಸಂಬಾರು ಪದಾರ್ಥಗಳ** ರಫ್ತನ್ನು, 1 ಲಕ್ಷ ಕೋಟಿ ಮೆಟ್ರಿಕ್ ಟನ್ ಗೆ ಹೆಚ್ಚಿಸುವ ಗುರಿ ಕೇಂದ್ರ ಸರ್ಕಾರ ಹೊಂದಿದೆ. ಹೀಗಾಗಿ ಸಂಬಾರು ಪದಾರ್ಥ ಬೆಳೆಗಾರರು, ರಫ್ತುದಾರರೂ ಆಗಲು ಅಗತ್ಯ ತಿಳಿವಳಿಕೆ ಹೊಂದಬೇಕು ಎಂದು, ಶಾಸಕ ಮಹೇಶ್ ಟೆಂಗಿನಕಾಯಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ, ತೋಟಗಾರಿಕೆ ಇಲಾಖೆ, ರಾಜ್ಯ ಸಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ ಹಾಗೂ ಕೊಚ್ಚಿನ್ ಭಾರತೀಯ ಸಂಬಾರು ಮಂಡಳಿಯಿಂದ ಆಯೋಜಿಸಲಾಗಿದ್ದ, ಸಂಬಾರು ಪದಾರ್ಥಗಳ ಖರೀದಿದಾರರ ಮತ್ತು ಮಾರಾಟಗಾರರ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

<><><>

**ಗದಗ ಜಿಲ್ಲೆ, ಕಪ್ಪತ್ತಗುಡ್ಡ ಅರಣ್ಯ ಪ್ರದೇಶದಲ್ಲಿ** ಗಣಿಗಾರಿಕೆಗೆ ರಾಜ್ಯ ಸರ್ಕಾರ ಅವಕಾಶ ನೀಡಬಾರದು ಎಂದು, ಧಾರವಾಡದ ಸಮಾಜ ಪರಿವರ್ತನಾ ಸಮುದಾಯದ ಅಧ್ಯಕ್ಷ ಎಸ್.ಆರ್ ಹಿರೇಮಠ ಆಗ್ರಹಿಸಿದ್ದಾರೆ. ಧಾರವಾಡದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆಗೆ ಮತ್ತೆ ರಾಜ್ಯ ಸರ್ಕಾರ ಮುಂದಾಗಿದೆ. ಈಚೆಗೆ ವನ್ಯಜೀವಿ ಸಲಹಾ ಮಂಡಳಿ ಸಭೆಯಲ್ಲಿ 28 ಗಣಿಗಾರಿಕೆ ಪ್ರಸ್ತಾವಗಳೂ ಸಲ್ಲಿಕೆಯಾಗಿವೆ ಎಂದು ಅವರು ತಿಳಿಸಿದರು.

<><><>

**ಹುಬ್ಬಳ್ಳಿಯ ಕೆ.ಎಲ್.ಇ ತಾಂತ್ರಿಕ ವಿಶ್ವವಿದ್ಯಾಲಯ,** ಧಾರವಾಡದ ಐ.ಐ.ಟಿ. ಹಾಗೂ ಟ್ರಿಪಲ್ ಐ.ಟಿ. ಸಹಯೋಗದಲ್ಲಿ, ಇನ್‌ಸ್ಟಿಟ್ಯೂಟ್ ಆಫ್ ಇಲೆಕ್ಟ್ರಿಕಲ್ ಆಂಡ್ ಇಲೆಕ್ಟ್ರಾನಿಕ್ಸ್ ಎಂಜಿನಿಯರ್ಸ್ ನ, ಎರಡನೇ ಅವೃತ್ತಿಯ ಅಂತಾರಾಷ್ಟ್ರೀಯ ಸಮ್ಮೇಳನ, ಇಂದಿನಿಂದ 28 ನೇ ತಾರೀಖಿನ ವರೆಗೆ, ಧಾರವಾಡದ ಐ.ಐ.ಟಿ.ಯಲ್ಲಿ ನಡೆಯಲಿದೆ. ರೇಣು ಎಂ. ರಮೇಶ, ಸಿ.ಪಿ ರವಿಕುಮಾರ ವಿಷಯ ಮಂಡಿಸಲಿದ್ದಾರೆ.

<><><>

**ವಿಜಯನಗರದ ಐತಿಹಾಸಿಕ ವಿಜಯ ವಿಠ್ಠಲ ದೇವಸ್ಥಾನದ** ಸಂಗೀತ ಮಂಟಪದಲ್ಲಿನ ಶಿಲಾ ಕಂಬಗಳನ್ನು ಮೀಟಿದರೆ, ಬರುವ ಸಂಗೀತ ತರಂಗವನ್ನು ಆಲಿಸಲು, ಈಗ ಕ್ಯೂ.ಆರ್. ಕೋಡ್ ಸ್ಕ್ಯಾನ್ ಮಾಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದ್ಯ ಹತ್ತು ಕಂಬಗಳ ತಳಭಾಗದಲ್ಲಿ ಪ್ರವಾಸಿಗರಿಗೆ ಎಟಕುವ ಎತ್ತರದಲ್ಲಿ, ಕ್ವಿಕ್ ರೆಸ್ಪಾನ್ಸ್ ಕೋಡ್ ಅಳವಡಿಸಲಾಗಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಹಂಪಿ ವೃತ್ತದ ಅಧೀಕ್ಷಕ ನಿಹಿಲ್ ದಾಸ್ ಮಾತನಾಡಿ, ಪ್ರವಾಸಿಗರ ಅನುಭವ, ಬೇಡಿಕೆ ನೋಡಿ, ಎಲ್ಲ 46 ಕಂಬಗಳ ತಳಭಾಗದಲ್ಲಿ ಕ್ಯೂ.ಆರ್. ಕೋಡ್ ಅಳವಡಿಸಲಾಗುವುದು ಎಂದರು.

<><><>

**ರಕ್ತದಾನ ಮಹಾದಾನ,** ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು ಎಂದು ಎಸ್.ಡಿ.ಎಂ. ವಿಶ್ವವಿದ್ಯಾಲಯದ ಉಪ ಕುಲಪತಿ, ಡಾಕ್ಟರ್ ನಿರಂಜನ ಕುಮಾರ ತಿಳಿಸಿದ್ದಾರೆ. ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಅವರ 77 ನೇ ಜನ್ಮದಿನದ ಅಂಗವಾಗಿ, ಸತ್ತೂರಿನ ಧರ್ಮಸ್ಥಳ ಮಂಜುನಾಥೇಶ್ವರ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ಜರುಗಿದ ರಕ್ತದಾನ ಹಾಗೂ ನೇತ್ರ ತಪಾಸಣೆ ಶಿಬಿರವನ್ನು ಉದ್ಘಾಟಿಸಿ, ಅವರು ಮಾತನಾಡಿದರು. ರಕ್ತಕ್ಕೆ ಪರ್ಯಾಯ ಇಲ್ಲ, ರಕ್ತದಾನ ಮಾಡುವುದರಿಂದ ಮತ್ತೊಬ್ಬರ ಜೀವ ಉಳಿಸಲು ಸಾಧ್ಯವಾಗುತ್ತದೆ ಎಂದರು. ಶಿಬಿರದಲ್ಲಿ 93 ಜನ ರಕ್ತದಾನ ಮಾಡಿದರು.

<><><>

**ಶಿಕ್ಷಣ ಹಕ್ಕು ಕಾಯ್ದೆ, ಆರ್.ಟಿ.ಇ** ಅಡಿ 14 ವರ್ಷದ ವರೆಗಿನ ಮಕ್ಕಳಿಗೆ ನೀಡಲಾಗುತ್ತಿರುವ ಉಚಿತ ಶಿಕ್ಷಣವನ್ನು, ಅಮೆರಿಕ ಮಾದರಿಯಲ್ಲಿ 18 ವರ್ಷದ ವರೆಗೆ ವಿಸ್ತರಿಸಲು, ಯೋಜಿಸಲಾಗುತ್ತಿದೆ ಎಂದು, ಶಾಲಾ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಹೇಳಿದ್ದಾರೆ. ಮಕ್ಕಳ ಹಕ್ಕುಗಳ ನಿಗಾ ಕೇಂದ್ರ, ವಿಧಾನಸೌಧದಲ್ಲಿ ಆಯೋಜಿಸಿದ್ದ, ರಾಜ್ಯ ಮಕ್ಕಳ ಹಕ್ಕುಗಳ ಸಂಸತ್ ನಲ್ಲಿ, ವಿದ್ಯಾರ್ಥಿನಿ ಹಾಸನದ ಪೂರ್ವಿಕಾ ಅವರ ಪ್ರಶ್ನೆಗೆ ಅವರು ಉತ್ತರಿಸಿದರು.

<><><>

**ಕನ್ನಡ ಎಂಬುದು ಕನ್ನಡಿಗರ ಮನದ ಒಡಲಾಳದ** ಮಾತಾಗಿದ್ದು, ಭಾಷೆಯ ನಿರಂತರ ಬಳಕೆಯ ಮೂಲಕ ಅದು ಬೆಳೆಯುತ್ತದೆ ಎಂದು ಡಾಕ್ಟರ್ ಜಿನದತ್ತ ಹಡಗಲಿ ಹೇಳಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ ಧಾರವಾಡ ಹಾಗೂ ಕೆ.ಪಿ.ಇ.ಎಸ್. ಪದವಿ ಪೂರ್ವ ಕಾಲೇಜಿನ ಆಶ್ರಯದಲ್ಲಿ, ಕನ್ನಡ ರಾಜ್ಯೋತ್ಸವದ ಪ್ರಯುಕ್ತ, ಕವಿ ಈಶ್ವರ ಸಣಕಲ್ಲ ದತ್ತಿ ಅಂಗವಾಗಿ, ಅವರು ವಿಶೇಷ ಉಪನ್ಯಾಸ ನೀಡಿದರು. ಇಂದು ಕರಡಿಗುಡ್ಡದ, ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಧಾರವಾಡ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ, ಸಂವಿಧಾನ ದಿನಾಚರಣೆ ನಡೆಯಲಿದೆ.

<><><>

**ದಕ್ಷಿಣ ಕನ್ನಡ ಜಿಲ್ಲೆ ಧರ್ಮಸ್ಥಳದಲ್ಲಿ** ಕಾರ್ತಿಕ ಮಾಸದ ಲಕ್ಷ ದೀಪೋತ್ಸವ ಕಾರ್ಯಕ್ರಮಗಳಿಗೆ ಇಂದು ಚಾಲನೆ ಸಿಗಲಿದೆ. ಮಧ್ಯಾಹ್ನ 3 ಗಂಟೆಗೆ 25 ಸಾವಿರ ಭಕ್ತರು ಉಜಿರೆಯಿಂದ ಧರ್ಮಸ್ಥಳಕ್ಕೆ ಭಜನೆ, ದೇವರ ನಾಮಸ್ಮರಣೆಯೊಂದಿಗೆ ಪಾದಯಾತ್ರೆಯಲ್ಲಿ ಸಾಗಲಿದ್ದಾರೆ. ಸಂಜೆ 7 ಗಂಟೆಗೆ ಡಾಕ್ಟರ್ ಡಿ.

ವೀರೇಂದ್ರ ಹೆಗ್ಗಡೆಯವರು ಅಮೃತವರ್ಷಿಣಿ ಸಭಾಭವನದಲ್ಲಿ ಭಕ್ತರಿಗೆ ಮಾರ್ಗದರ್ಶನ ನೀಡಲಿದ್ದಾರೆ. 29 ಹಾಗೂ 30 ನೇ ತಾರೀಖಿನಂದು 92 ನೇ ವರ್ಷದ ಸರ್ವಧರ್ಮ ಸಮ್ಮೇಳನ ಹಾಗೂ ಸಾಹಿತ್ಯ ಸಮ್ಮೇಳನ ಜರುಗಲಿದೆ.

<><><>

**ಬೀದರ ಜಿಲ್ಲಾ ಪೊಲೀಸ್ ಕವಾಯತ** ಮೈದಾನದಲ್ಲಿ ಆರಂಭಗೊಂಡ ಜಿಲ್ಲಾ ಪೊಲೀಸ್ ಕ್ರೀಡಾಕೂಟ 2024 ಕ್ಕೆ ಅಂತಾರಾಷ್ಟ್ರೀಯ ಕ್ರಿಕೆಟ್ ಆಟಗಾರ, ದೊಡ್ಡ ಗಣೇಶ್ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡಿದ್ದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

**<><><>**